# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಂಗಳೂರು(ನಗರ), ಬೆಂಗಳೂರು(ಗ್ರಾ), ತುಮಕೂರು, ಉತ್ತರ ಕನ್ನಡ, ರಾಮನಗರ ಮತ್ತು ಚಾಮರಾಜನಗರ ಜಿಲ್ಲೆಗಳ ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಶಿಥಿಲಗೊಂಡಿರುವ ಸರ್ಕಾರಿ ಕಟ್ಟಡಗಳ ತುರ್ತು ಸಣ್ಣ ಕಾಮಗಾರಿಗಳಿಗಾಗಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

ಮಾನ್ಯ ಶಾಸಕರು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮನವಿ ಪತ್ರಗಳು

**ಪ್ರಸ್ತಾವನೆ:**

ಮಾನ್ಯ ಶಾಸಕರುಗಳು ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಬೆಂಗಳೂರು(ನಗರ) ಇವರು ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಶಿಥಿಲಗೊಂಡಿರುವ ಸರ್ಕಾರಿ ಕಟ್ಟಡಗಳ ತುರ್ತು ದುರಸ್ಥಿಗಾಗಿ ರೂ.50.00ಲಕ್ಷಗಳನ್ನು, ಮಾನ್ಯ ಶಾಸಕರು, ನೆಲಮಂಗಲ ಇವರು ನೆಲಮಂಗಲ ತಾಲ್ಲೂಕು ಪಂಚಾಯತಿ ವ್ಯಾಪ್ತಿಯಲ್ಲಿ ಶಿಥಿಲಗೊಂಡಿರುವ ಸರ್ಕಾರಿ ಕಟ್ಟಡಗಳ ತುರ್ತು ದುರಸ್ಥಿಗಾಗಿ ರೂ.50.00ಲಕ್ಷಗಳನ್ನು, ಚಾಮರಾಜನಗರ ಜಿಲ್ಲೆ ಕೊಳ್ಳೇಗಾಲ ತಾಲ್ಲೂಕು ವ್ಯಾಪ್ತಿಯ ಸರ್ಕಾರಿ ಕಟ್ಟಡಗಳ ತುರ್ತು ದುರಸ್ಥಿಗಾಗಿ ರೂ.50.00ಲಕ್ಷಗಳನ್ನು, ಹಾಸನ ಜಿಲ್ಲೆ ಹಾಸನ ಮತ್ತು ಸಕಲೇಶಪುರ ತಾಲ್ಲೂಕು ವ್ಯಾಪ್ತಿಯ ಸರ್ಕಾರಿ ಕಟ್ಟಡಗಳ ತುರ್ತು ದುರಸ್ಥಿಗಾಗಿ ಅನುಕ್ರಮವಾಗಿ ರೂ.50.00ಲಕ್ಷ ಹಾಗೂ ರೂ.30.00ಲಕ್ಷಗಳನ್ನು ಹಾಗೂ ಉತ್ತರ ಕನ್ನಡ ಜಿಲ್ಲೆ ಕುಮಟಾ ತಾಲ್ಲೂಕು ವ್ಯಾಪ್ತಿಯ ಸರ್ಕಾರಿ ಕಟ್ಟಡಗಳ ತುರ್ತು ದುರಸ್ಥಿಗಾಗಿ ರೂ.50.00ಲಕ್ಷದಂತೆ ಒಟ್ಟು ರೂ.280.00ಲಕ್ಷಗಳನ್ನು ಲಿಂಕ್ ಲೆಕ್ಕ ಶೀರ್ಷಿಕೆ 2059-80-196-1-01-300 (ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ 2059-00-101-0-28-200)ರಡಿ ಬಿಡುಗಡೆಗೊಳಿಸಲು ಪ್ರಸ್ತಾವಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಲೆಕ್ಕ ಶೀರ್ಷಿಕೆ 2059-80-196-1-01-300ರಡಿ ಲಭ್ಯವಿರುವ ಅನುದಾನದಿಂದ ರೂ.280.00ಲಕ್ಷಗಳನ್ನು ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 495 ವೆಚ್ಚ 6/2021 ಇ ದಿನಾಂಕ:27ನೇ ಅಕ್ಟೋಬರ್ 2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಕೆಳಕಂಡ ಅನುಬಂಧದ ಕಾಲಂ 2ರ ಜಿಲ್ಲಾ ಪಂಚಾಯತಿಗಳಿಗೆ ಕಾಲಂ 3ರ ಕಾರ್ಯಕ್ರಮದಡಿ ನಿರ್ವಹಣೆಗಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ಒಟ್ಟು ರೂ.280.00ಲಕ್ಷ (ರೂಪಾಯಿ ಎರಡು ನೂರ ಎಂಬತ್ತು ಲಕ್ಷಗಳು ಮಾತ್ರ)ಗಳನ್ನು ಬಿಡುಗಡೆಗೊಳಿಸಲಾಗಿದೆ.

(ರೂ.ಲಕ್ಷಗಳಲ್ಲಿ)

| ಕ್ರಸಂ. | ಜಿಲ್ಲಾ ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | **2059-80-196-1-01-300 ಅಡಿ ಬಿಡುಗಡೆಗೊಳಿಸಿದ ಅನುದಾನ** |
|---|---|---|---|
| 1 | ಬೆಂಗಳೂರು(ನಗರ) | 2059-00-101-0-28-200 | 50.00 |
| 2 | ಬೆಂಗಳೂರು(ಗ್ರಾ) | 2059-00-101-0-28-200 | 50.00 |
| 3 | ಹಾಸನ | 2059-00-101-0-28-200 | 80.00 |
| 4 | ಚಾಮರಾಜನಗರ | 2059-00-101-0-28-200 | 50.00 |
| 5 | ಉತ್ತರ ಕನ್ನಡ | 2059-00-101-0-28-200 | 50.00 |
| | | **ಒಟ್ಟು** | **280.00** |

ಕರ್ನಾಟಕ ರಾಜ್ಯಪಾಲ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಶ್ರೀಕೃಷ್ಣ ಎನ್. ಬಗಟ್ಯಾಗೋಳ)

ವಿಶೇಷಾಧಿಕಾರಿ(ಜಿಪಂ) ಹಾಗೂ ಪದನಿಮಿತ್ತ

ಸರ್ಕಾರದ ಜಂಟಿ ಕಾರ್ಯದರ್ಶಿ

ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ), ಲೆಕ್ಕ ಪರಿಶೋಧನೆ, 1 &2, ಕರ್ನಾಟಕ ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
3. ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು
4. ಆಯುಕ್ತರು, ಖಜಾನೆ ಆಯುಕ್ತಾಲಯ, ಬೆಂಗಳೂರು
5. ಉಪ ನಿರ್ದೇಶಕರು, ಖಜಾನೆ-2, 5ನೇ ಮಹಡಿ, ಕೆ.ಪಿ.ಟಿ.ಸಿ.ಎಲ್. ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು
6. ಸಂಬಂಧಿಸಿದ ಜಿಲ್ಲಾ ಖಜಾನಾಧಿಕಾರಿಗಳು
7. ರಕ್ಷಾ ಕಡತಕ್ಕೆ
8. ಹೆಚ್ಚುವರಿ ಪ್ರತಿ